10

ಕರ್ನಾಟಕ ಸರ್ಕಾರದ ನಡವಳಿಗಳು

ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮ
ಸಂಖ್ಯೆ: 361415
14 MAR 2023
ಕೇಂದ್ರ ಕಛೇರಿ
ಬೆಂಗಳೂರು-1

ಅಂಬೇಡ್ಕರ್ ನಿಗಮವು ಸೇರಿದಂತೆ, ವಿವಿಧ ನಿಗಮಗಳಲ್ಲಿ, ಉದ್ಯಮ ಶೀಲತೆ, ಐರಾವತಾ ಹಾಗೂ ಇತ್ಯಾದಿ ಯೋಜನೆಗಳ ಸೌಲಭ್ಯ ಪಡೆಯಲು ಫಲಾನುಭವಿಗಳಿಗೆ 50 ವರ್ಷದ ವಯೋಮಿತಿಯನ್ನು ನಿಗಧಿಪಡಿಸಲಾಗಿದ್ದು, ನಿಗಧಿಪಡಿಸಲಾದ ವಯೋಮಿತಿಯನ್ನು 50 ರಿಂದ 56 ವರ್ಷಕ್ಕೆ ಹೆಚ್ಚಿಸಿ, ವಯೋಮಿತಿ ಸಡಿಲಿಕೆ ಮಾಡಿ ಆದೇಶಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಸಕಇ 252 ಎಸ್ ಡಿಸಿ 2022, ದಿನಾಂಕ:13.01.2023 ಮತ್ತು 20.01.2023
2. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಟಿಪ್ಪಣಿ ಸಂಖ್ಯೆ: BCW/MIN/5730/2022-23, ದಿನಾಂಕ:31.01.2023.

******

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಾಂಕ (1)ರಲ್ಲಿನ ಸರ್ಕಾರಿ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು 60 ವರ್ಷಕ್ಕೆ ಸೀಮಿತಗೊಳಿಸಿರುವ ಆದೇಶವನ್ನು ರದ್ದುಗೊಳಿಸಿ ಜಂಟಿ ಖಾತೆಯಲ್ಲಿರುವ ಅರ್ಹ ಅರ್ಜಿದಾರರನ್ನು ಪರಿಗಣಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2) ರ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ದಿನಾಂಕ:31.01.2023ರ ಟಿಪ್ಪಣಿಯಲ್ಲಿ ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮವು ಸೇರಿದಂತೆ ವಿವಿಧ ನಿಗಮಗಳಲ್ಲಿ, ಉದ್ಯಮಶೀಲತೆ ಐರಾವತ ಹಾಗೂ ಇತ್ಯಾದಿ ಯೋಜನೆಗಳ ಸೌಲಭ್ಯ ಪಡೆಯಲು ಫಲಾನುಭವಿಗಳಿಗೆ 50 ವರ್ಷದ ವಯೋಮಿತಿಯನ್ನು ನಿಗದಿಪಡಿಸಲಾಗಿದ್ದು, ನಿಗಧಿಪಡಿಸಲಾದ ವಯೋಮಿತಿಯನ್ನು 50 ರಿಂದ 56 ವರ್ಷಕ್ಕೆ ಹೆಚ್ಚಿಸಿ ವಯೋಮಿತಿ ಸಡಿಲಿಕೆ ಮಾಡಿ ಆದೇಶಿಸುವಂತೆ ಸೂಚಿಸಿರುತ್ತಾರೆ.

ಮೇಲಿನ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 252 ಎಸ್‌ಡಿಸಿ 2022,**
**ಬೆಂಗಳೂರು, ದಿನಾಂಕ:13.02.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಬೇಡ್ಕರ್ ನಿಗಮವು ಸೇರಿದಂತೆ, ವಿವಿಧ ನಿಗಮಗಳಲ್ಲಿ, ಉದ್ಯಮ ಶೀಲತೆ, ಐರಾವತಾ ಹಾಗೂ ಇತ್ಯಾದಿ ಯೋಜನೆಗಳ ಸೌಲಭ್ಯ ಪಡೆಯಲು ಫಲಾನುಭವಿಗಳಿಗೆ 50 ವರ್ಷದ ವಯೋಮಿತಿಯನ್ನು ನಿಗಧಿಪಡಿಸಲಾಗಿದ್ದು, ನಿಗಧಿಪಡಿಸಲಾದ ವಯೋಮಿತಿಯನ್ನು 50 ರಿಂದ 56 ವರ್ಷಕ್ಕೆ ಹೆಚ್ಚಿಸಿ, ವಯೋಮಿತಿ ಸಡಿಲಿಕೆ ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

13-02-2023
(ವಿ.ಪ್ರಕಾಶ್)
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ADCV
14/2/23

ಇವರಿಗೆ:
1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

3. ಸಂಬಂಧಪಟ್ಟ ಎಲ್ಲಾ ನಿಗಮಗಳು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.